**ಒಂದನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ 2529/2021**

| | | | |
|---|---|---|---|
| **ಸಾಕ್ಷಿದಾರರ ಹೆಸರು** | - | ಅಭಿಷೇಕ್ | **ಚಾ.ಸಾ.-8** |
| **ತಂದೆಯ ಹೆಸರು** | - | ತಿಮ್ಮಯ್ಯ | **ಫ್ರಾ.ಸಾ.-5** |
| **ವಯಸ್ಸು** | - | 30 ವರ್ಷ | |
| **ಉದ್ಯೋಗ** | - | ವ್ಯವಸಾಯ | |
| **ವಾಸಸ್ಥಳಃ** | - | ಕೊಕ್ಕರೆ ಬೆಳ್ಳೂರು | |

ದಿನಾಂಕಃ 22-06-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ಆರೋಪಿತರನ್ನು ಈ ಹಿಂದೆ ಎಲ್ಲೂ ಸಹಿ ಮಾಡಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆ ಅಮಾನತ್ತು ಮಹಜರ್ ಆಗಿದ್ದು, ಅದನ್ನು ನಿಪಿ–10 ಎ, ಸಾಕ್ಷಿಯ ಸಹಿ ನಿಪಿ–10 ಎ ಎಂದು ಗುರುತಿಸಲಾಯಿತು. ನಿಪಿ–10 ರಲ್ಲಿ ಪೊಲೀಸರು ಏನು ಬರೆದಿರುತ್ತಾರೆಂದು ನನಗೆ ಗೊತ್ತಿಲ್ಲ. ಸದರಿ ಸಹಿಯನ್ನು ನಾನು ಪೋಲೀಸ್ ಠಾಣೆಯಲ್ಲಿ ಮಾಡಿರುತ್ತೆನೆ. ನನ್ನನ್ನು ಹೊರತುಪಡಿಸಿ ಸದರಿ ನಿಪಿ–10 ಅಮಾನತ್ತು ಮಹಜರ್ ಗೆ ಯಾರು ಸಹಿ ಮಾಡಿರುತ್ತಾರೆಂದು ನನಗೆ ಗೊತ್ತಿಲ್ಲ. ಸದರಿ ಸಹಿಯನ್ನು ನಾನು ಮಾಡಿದ ತಾರೀಖು, ತಿಂಗಳು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿ, ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ. ಚಾಯ ಚಿತ್ರಗಳನ್ನು ಠಾಣೆಯಲ್ಲಿ ತೆಗೆದಿರುತ್ತಾರೆ, ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆಂದು ಗೊತ್ತಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಹೇಳಿಕೆ ಕೊಟ್ಟಿರುತ್ತೇನೆಂದರೆ ಸರಿಯಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ–**

ದಿ 10–03–2021 ರಂದು ಸುಮಾರು ಬೆಳಗ್ಗೆ 10.00–10.45 ಗಂಟೆ ಸಮಯದಲ್ಲಿ ಪೊಲೀಸರು ಸ್ಥಳದಲ್ಲಿ ಆರೋಪಿತರು ಕಳ್ಳತನ ಮಾಡಲು ಉಪಯೋಗಿಸಿದ ಟಿವಿಎಸ್ ವಿಕ್ಟರ್

ಮೋ॰ ಸೈಕಲ್ ಸಂಖ್ಯೆ ಕೆಎ–2–ಇಹೆಚ್ 6112 ರ ವಾಹನವನ್ನು ಮತ್ತು 1 ನೇ ಆರೋಪಿಯಿಂದ ಚಾಸಾ–1 ರವರ ಬಾಬ್ತು ಕಪ್ಪು ಬಣ್ಣದ ಲೆನೋವಾ ಕಂಪನಿಯ ಟಚ್ ಸ್ಕಿನ್ ಮೊಬೈಲ್, 2 ನೇ ಆರೋಪಿಯಿಂದ ಚಾಸಾ–1 ರವರ ಬಾಬ್ತು ಒಪ್ಪೋ ಕಂಪನಿಯ ಟಚ್ ಸ್ಕಿನ್ ಮೊಬೈಲ್ ನ್ನು ಚಾಸಾ–1 ಮತ್ತು ನಿಮ್ಮ, ಚಾಸಾ–9 ರವರ ಸಮಕ್ಷಮ ಅಮಾನತ್ತು ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ.

ಈ ಬಗ್ಗೆ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ಒಪ್ಪದ ಹೇಳಿಕೆಯನ್ನು ನಿಪಿ–11 ಎಂದು ಗುರುತಿಸಲಾಯಿತು. ನಿಪಿ–10, 11 ರಲ್ಲಿರುವ ವಿಚಾರಗಳು ನಿಮಗೆ ಎಲ್ಲಾ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಮಾನ್ಯ ಶ್ರೀ. ವಕೀಲರಿಂದಃ–**

ಏನು ಇಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

1 ನೇ ಅಪರ ಸಿವಿಲ್ ನ್ಯಾಯಾಧೀಶರು

ಸಾಕ್ಷಿ ಸಹಿ

ಮತ್ತು ಜೆ ಎಂ ಎಫ್ ಸಿ , ಮದ್ದೂರು.